## ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | *110 |
| ಸದಸ್ಯರ ಹೆಸರು | ಶ್ರೀ ಕೆ.ಪಿ. ನಂಜುಂಡಿ ವಿಶ್ವಕರ್ಮ |
| ಉತ್ತರಿಸುವ ದಿನಾಂಕ | 14-02-2024 |
| ಉತ್ತರಿಸುವವರು | ಸಾರಿಗೆ ಮತ್ತು ಧಾರ್ಮಿಕ ದತ್ತಿ ಸಚಿವರು |

### ಪ್ರಶ್ನೆ

ಅ) ರಾಜ್ಯದಲ್ಲಿ ಒಟ್ಟು ಎಷ್ಟು ಪ್ರಾಧಿಕಾರಗಳಿವೆ ಮತ್ತು ಅವುಗಳು ಯಾವುವು; ಎಲ್ಲಾ ಪ್ರಾಧಿಕಾರಗಳ ಅಭಿವೃದ್ಧಿಗಾಗಿ ಸರ್ಕಾರ ಕಳೆದ 5 ವರ್ಷಗಳಿಂದ ಇಲ್ಲಿಯವರೆಗೆ ನೀಡಿದ ಅನುದಾನ ಮತ್ತು ಬಳಕೆ ವಿವರ ನೀಡುವುದು;

### ಉತ್ತರ

ಧಾರ್ಮಿಕ ದತ್ತಿ ಇಲಾಖೆಯ ವ್ಯಾಪ್ತಿಗೆ ಸೇರಿದ ಅಧಿಸೂಚಿತ ಸಂಸ್ಥೆಯಾಗಿರುವ ಚಾಮರಾಜನಗರ ಜಿಲ್ಲೆ, ಕೊಳ್ಳೇಗಾಲ ತಾಲ್ಲೂಕಿನ ಶ್ರೀ ಮಲೈ ಮಹದೇಶ್ವರಸ್ವಾಮಿ ದೇವಾಲಯವನ್ನು ಅಂತರಾಷ್ಟ್ರೀಯ ಯಾತ್ರಾ ಸ್ಥಳವನ್ನಾಗಿ, ಸಾಂಸ್ಕೃತಿಕ ಪ್ರವಾಸಿ ಕೇಂದ್ರವನ್ನಾಗಿ ಅಭಿವೃದ್ಧಿಪಡಿಸಲು ಹಾಗೂ ದೇವಾಲಯಕ್ಕೆ ಆಗಮಿಸುವ ಭಕ್ತಾದಿಗಳಿಗೆ ಮೂಲಭೂತ ಸೌಕರ್ಯ ಹಾಗೂ ಅಗತ್ಯವಾದ ಅನುಕೂಲತೆಗಳನ್ನು ಕಲ್ಪಿಸಿಕೊಡುವ ಉದ್ದೇಶದಿಂದ ಶ್ರೀ ಮಲೈ ಮಹದೇಶ್ವರಸ್ವಾಮಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರವನ್ನು ಅಧಿಸೂಚನೆ ಸಂಖ್ಯೆ: ಸಂವ್ಯಶಾಇ 06 ಶಾಸನ 2013, ದಿನಾಂಕ:16.03.2013 ರಂತೆ ರಚಿಸಲಾಗಿದೆ.

**ಸದರಿ ಅಭಿವೃದ್ಧಿ ಪ್ರಾಧಿಕಾರದ ಅಭಿವೃದ್ಧಿಗಾಗಿ ಕಳೆದ 5 ವರ್ಷಗಳಿಂದ ಇಲ್ಲಿಯವರೆಗೆ ಬಿಡುಗಡೆ ಮಾಡಿದ ಅನುದಾನ ಮತ್ತು ಬಳಕೆ ವಿವರ ಈ ಕೆಳಕಂಡಂತಿದೆ.**

- ಶ್ರೀ ಮಲೈ ಮಹದೇಶ್ವರಸ್ವಾಮಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರದ ಅಭಿವೃದ್ಧಿಗಾಗಿ ಮಾನ್ಯ ವಿಧಾನ ಪರಿಷತ್ತು ಸದಸ್ಯರಾದ ಶ್ರೀ ಎನ್.ಮರಿತಿಬ್ಬೇಗೌಡ ರವರ ಶಾಸಕರ ಪ್ರದೇಶಾಭಿವೃದ್ಧಿ ಯೋಜನೆ ಅಡಿಯಲ್ಲಿ ಶೇಕಡ 75 ಅಂದರೆ ರೂ.11,25,000/- ಗಳನ್ನು ಅನುದಾನವಾಗಿ ಜಿಲ್ಲಾಧಿಕಾರಿಗಳು, ಚಾಮರಾಜನಗರ ಜಿಲ್ಲೆರವರ ಮುಖಾಂತರ ಪ್ರಾಧಿಕಾರದ ಖಾತೆಗೆ ಜಮೆ ಪಡೆಯಲಾಗಿದೆ.
- ಸದರಿ ರೂ. 11,25,000/- ಮೊಬಲಗನ್ನು ಶ್ರೀ ಮಲೈ ಮಹದೇಶ್ವರಸ್ವಾಮಿ ದೇವಾಲಯ ಮಹದೇಶ್ವರ ಬೆಟ್ಟ ಅಡುಗೆ ಮನೆ ಅಭಿವೃದ್ಧಿ ಕಾಮಗಾರಿಗಾಗಿ ಬಳಕೆ ಮಾಡಲಾಗಿದೆ.

ಕಳೆದ 5 ವರ್ಷಗಳಲ್ಲಿ ಪ್ರಾಧಿಕಾರದವತಿಯಿಂದ ಸಂಗ್ರಹವಾದ ಹಣದಲ್ಲಿ ಕೈಗೊಳ್ಳಲಾದ ಕಾಮಗಾರಿಗಳ ವಿವರ ಈ ಕೆಳಕಂಡಂತಿದ

| ಕ್ರ. ಸಂ | ಆರ್ಥಿಕ ವರ್ಷ | ಕಾಮಗಾರಿಗಳ ಸಂಖ್ಯೆ | ಒಟು ಮೊತ್ತ (ರೂ ಗಳಲ್ಲಿ) |
|---|---|---|---|
| 1 | 2018-19 | 37 | 16882888.00 |
| 2 | 2019-20 | 19 | 306862274.00 |
| 3 | 2020-21 | 21 | 13321212.00 |
| 4 | 2021-22 | 15 | 30886925.00 |
| 5 | 2022-23 | ಹಾಲಿ ಕಾಮಗಾರಿಗಳು ಪ್ರಗತಿಯಲ್ಲಿರುತ್ತದ ಮತ್ತು ಹೊಸದಾಗಿ ಪ್ರಾಧಿಕಾರದ ಸಭೆಯಲ್ಲಿ ಅನುಮೋದನೆಗೊಂಡ ಕಾಮಗಾರಿಗಳಿಗೆ ಆಡಳಿತಾತ್ಮಕ ಮಂಜೂರಾತಿ ನೀಡಲು ಬಾಕಿ ಇರುತ್ತದೆ | 0.00 |
| | | 92 | 30886925.00 |

**30 ಕೋಟಿ 88 ಲಕ್ಷದ 6925ರೂಪಾಯಿಗಳು ಮಾತ್ರ**

| | | |
|---|---|---|
| ಆ) | ಸಾವಿರಾರು ವರ್ಷಗಳಿಂದ ವಿಶ್ವಕರ್ಮ ಸಮಾಜದ ಕೊಡುಗೆಗಳು ಅಪಾರವಾಗಿದ್ದು, ಈ ಸಮಾಜದ ಕುಲದೇವರುಗಳಾದ ಸಿರಸಂಗಿ ಕಾಳಿಕಾದೇವಿ ದೇವಸ್ಥಾನ (ಬೆಳಗಾವಿ ಜಿಲ್ಲೆ) ತಿಂಥಣಿ ಮೌನೇಶ್ವರ ದೇವಸ್ಥಾನ (ಯಾದಗಿರಿ ಜಿಲ್ಲೆ) ಚಿಕ್ಕಲ್ಲೂರಿನ ಸಿದ್ದಪ್ಪಾಜಿ ದೇವಾಲಯ (ಹಳೇಮಠ, ಚಾಮರಾಜನಗರಜಿಲ್ಲೆ) ಚಿಕ್ಕಬಳ್ಳಾಪುರದ ಕಾಲಜ್ಞಾನಿ ವೀರ ಬ್ರಹ್ಮೇಂದ್ರ ಸ್ವಾಮಿಯವರ ದೇವಾಲಯ ಪಾಪಾಗ್ನಿ ಮಠ ಈ ಐತಿಹಾಸಿಕ ಸ್ಥಳಗಳನ್ನು ಉಳಿಸಿ ಅಭಿವೃದ್ಧಿ ಪಡಿಸಲು ಸರ್ಕಾರ ಆಲೋಚಿಸಿದೆಯೇ; | ಬೆಳಗಾವಿ ಜಿಲ್ಲೆ, ಸಿರಸಂಗಿ ಶ್ರೀ ಕಾಳಿಕಾದೇವಿ ದೇವಸ್ಥಾನ ಮತ್ತು ಯಾದಗಿರಿ ಜಿಲ್ಲೆ, ತಿಂಥಣಿ ಮೌನೇಶ್ವರ ದೇವಸ್ಥಾನಗಳು ಧಾರ್ಮಿಕ ದತ್ತಿ ಇಲಾಖೆಯ ವ್ಯಾಪ್ತಿಗೆ ಒಳಪಟ್ಟಿರುವ ಅಧಿಸೂಚಿತ ಸಂಸ್ಥೆಗಳಾಗಿವೆ<br>1) ಬೆಳಗಾವಿ ಜಿಲ್ಲೆ, ಸಿರಸಂಗಿ ಶ್ರೀ ಕಾಳಿಕಾದೇವಿ ದೇವಸ್ಥಾನವು ಪ್ರವರ್ಗ 'ಸಿ' ಅಧಿಸೂಚಿತ ದೇವಾಲಯವಾಗಿದೆ.<br>2) ಯಾದಗಿರಿ ಜಿಲ್ಲೆ, ತಿಂಥಣಿ ಮೌನೇಶ್ವರ ದೇವಸ್ಥಾನವು ಪ್ರವರ್ಗ 'ಎ' ಅಧಿಸೂಚಿತ ದೇವಸ್ಥಾನವಾಗಿದ್ದು, 2022-23ನೇ ಸಾಲಿನಲ್ಲಿ ದೇವಾಲಯದ ವಾಸ್ತವಿಕ ಆದಾಯವು ರೂ. 81,51,138/-ಗಳಾಗಿದ್ದು, ಪ್ರಸ್ತುತ ದೇವಾಲಯದ ಉಳಿತಾಯ ಖಾತೆಯಲ್ಲಿ ರೂ .1,19,00,380/- ಗಳಿವೆ. ದೇವಾಲಯದ ನಿಶ್ಚಿತ ಠೇವಣಿಯಲ್ಲಿ ರೂ. 1,05,00,103/-ಗಳಿವೆ.<br><br>**ತಿಂಥಣಿ ಮೌನೇಶ್ವರ ದೇವಸ್ಥಾನಕ್ಕೆ ಬರುವ ಭಕ್ತಾದಿಗಳ ಅನುಕೂಲಕ್ಕಾಗಿ ಈ ಕೆಳಕಂಡ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲಾಗಿದೆ.**<br>1) ದೇವಸ್ಥಾನದಲ್ಲಿ ಕುಡಿಯುವ ನೀರಿನ ವ್ಯವಸ್ಥೆ ಇರುತ್ತದೆ.<br>2) ದೇವಸ್ಥಾನಕ್ಕೆ ಆಗಮಿಸುವ ಭಕ್ತಾದಿಗಳ ಅನುಕೂಲಕ್ಕಾಗಿ 12 ವಸತಿ ಗೃಹಗಳು ಹಾಗೂ 01 ಯಾತ್ರಿ ನಿವಾಸದ ವ್ಯವಸ್ಥೆ ಇರುತ್ತದೆ.<br>3) ದೇವಸ್ಥಾನಕ್ಕೆ ಸಮೀಪದಲ್ಲಿ ಒಂದು ನದಿ ಇದ್ದು, ದೇವಾಲಯಕ್ಕೆ ಆಗಮಿಸುವ ಭಕ್ತಾದಿಗಳ ಅನುಕೂಲಕ್ಕಾಗಿ ನದಿಗೆ ಹೋಗುವ ಮಾರ್ಗದಲ್ಲಿ ವಿದ್ಯುತ್ ವ್ಯವಸ್ಥೆ ಇರುತ್ತದೆ.<br>4) ದೇವಸ್ಥಾನದಲ್ಲಿ ಭಕ್ತಾದಿಗಳ ದರ್ಶನಕ್ಕಾಗಿ ಕ್ಯೂ-ಲೈನ್ ವ್ಯವಸ್ಥೆ ಕಲ್ಪಿಸಲಾಗಿರುತ್ತದೆ.<br>5) ದೇವಸ್ಥಾನಕ್ಕೆ ಆಗಮಿಸುವ ಭಕ್ತಾದಿಗಳಿಗೆ ಅನ್ನದಾಸೋಹದ ವ್ಯವಸ್ಥೆ ಕಲ್ಪಿಸಲಾಗಿರುತ್ತದೆ.<br>6) ದೇವಸ್ಥಾನಕ್ಕೆ ಭಕ್ತಾದಿಗಳ ಅನುಕೂಲಕ್ಕಾಗಿ ಶೌಚಾಲಯ ಮತ್ತು ಸ್ನಾನ ಗೃಹದ ವ್ಯವಸ್ಥೆ ಇರುತ್ತದೆ.<br>7) ದೇವಸ್ಥಾನದಲ್ಲಿ ಭಕ್ತಾದಿಗಳ ಅನುಕೂಲಕ್ಕಾಗಿ ಕಾರ್ಯಕ್ರಮ ನಡೆಸಲು ಕಲ್ಯಾಣ ಮಂಟಪದ ವ್ಯವಸ್ಥೆ ಇರುತ್ತದೆ.<br>8) ದೇವಸ್ಥಾನದಲ್ಲಿ ಹೈಮಾಸ್ಟ್ ವ್ಯವಸ್ಥೆ ಇರುತ್ತದೆ.<br><br>ಚಾಮರಾಜನಗರ ಜಿಲ್ಲೆ, ಚಿಕ್ಕಲ್ಲೂರಿನ ಸಿದ್ದಪ್ಪಾಜಿ ದೇವಾಲಯ (ಹಳೇಮಠ) ಚಿಕ್ಕಬಳ್ಳಾಪುರ ಜಿಲ್ಲೆಯ ಕಾಲಜ್ಞಾನಿ ವೀರ ಬ್ರಹ್ಮೇಂದ್ರ ಸ್ವಾಮಿಯವರ ದೇವಾಲಯ ಪಾಪಾಗ್ನಿ ಮಠ ಈ ಐತಿಹಾಸಿಕ ಸ್ಥಳಗಳು ಖಾಸಗಿ ಧಾರ್ಮಿಕ ಸಂಸ್ಥೆಗಳಾಗಿವೆ. ಈ ಕ್ಷೇತ್ರಗಳ ಅಭಿವೃದ್ಧಿಗೆ ಯಾವುದೇ ಪ್ರಸ್ತಾವನೆಗಳು ಸ್ವೀಕೃತವಾಗಿರುವುದಿಲ್ಲ. |

| | | |
|---|---|---|
| ಇ) | ಸದರಿ 4 ಧಾರ್ಮಿಕ ಕ್ಷೇತ್ರಗಳನ್ನು ಒಟ್ಟುಗೂಡಿಸಿ ಪ್ರಾಧಿಕಾರವನ್ನಾಗಿ ಮಾಡಲು ಸರ್ಕಾರಕ್ಕೇನಾದರೂ ಕಾನೂನಿನ ತೊಡಕುಗಳಿವೆಯೇ; ಇಲ್ಲದಿದ್ದಲ್ಲಿ, ದೇಶಕ್ಕೆ ಕೊಡುಗೆ ನೀಡಿದ ವಿಶ್ವಕರ್ಮ ಸಮಾಜದ ಮೂಲ ಕುಲದೇವರುಗಳ ದೇವಾಲಯಗಳನ್ನು ನಿರ್ಲಕ್ಷಿಸಲು ಕಾರಣವೇನು? | ಸದರಿ 4 ಧಾರ್ಮಿಕ ಕ್ಷೇತ್ರಗಳನ್ನು ಒಟ್ಟುಗೂಡಿಸಿ ಪ್ರಾಧಿಕಾರವನ್ನಾಗಿ ಮಾಡುವ ಬಗ್ಗೆ ಸದ್ಯಕ್ಕೆ ಸರ್ಕಾರದ ಮುಂದೆ ಯಾವುದೇ ಪ್ರಸ್ತಾವನೆ ಇರುವುದಿಲ್ಲ. |

ಸಂಖ್ಯೆ: ಕಂಇ 13 ಮುಸಪ್ರ 2024

(ರಾಮಲಿಂಗಾರೆಡ್ಡಿ)
ಸಾರಿಗೆ ಮತ್ತು ಧಾರ್ಮಿಕ ದತ್ತಿ ಸಚಿವರು